# Akashvani : Bangalore
# Regional Bulletin In Kannada
# 10.05.2024 / 14.50 hrs

## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಸರ್ಕಾರಿ ವಸತಿ ಶಾಲೆಗಳ ವಿದ್ಯಾರ್ಥಿಗಳು ಶೈಕ್ಷಣಿಕ ರಂಗದಲ್ಲಿ ರಾಜ್ಯಕ್ಕೆ ಮಾದರಿಯಾಗಬೇಕು -ಮುಖ್ಯಮಂತ್ರಿ ಸಿದ್ದರಾಮಯ್ಯ

೨. ರಾಜ್ಯಾದ್ಯಂತ ಬಸವ ಜಯಂತಿ ಸಂಭ್ರಮ; ಚುನಾವಣಾ ನೀತಿ ಸಂಹಿತೆ ಹಿನ್ನೆಲೆ ಸರಳ ಆಚರಣೆ

೩. ಇದೇ ೧೨ ರಂದು ದಾವಣಗೆರೆಯಲ್ಲಿ ಪಾರಂಪರಿಕ ಬೀಜೋತ್ಸವ; ಒಂದು ಸಾವಿರಕ್ಕೂ ಹೆಚ್ಚು ದೇಸಿ ಧಾನ್ಯಗಳ ಪ್ರದರ್ಶನ

೪. ಐಪಿಎಲ್ ಕ್ರಿಕೆಟ್; ಇಂದು ಗುಜರಾತ್ ಟೈಟಾನ್ಸ್ - ಚೆನ್ನೈ ಸೂಪರ್ ಕಿಂಗ್ಸ್ ತಂಡಗಳ ಹಣಾಹಣಿ

<><*<><>*><>

ಎಸ್ಎಸ್ಎಲ್‌ಸಿಯಲ್ಲಿ ಪ್ರಥಮ ಸ್ಥಾನಪಡೆದ ಮೈಸೂರಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿನಿ ಅಂಕಿತಾ ಬಸಪ್ಪ ಕೊನ್ನೂರು ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದಿಸಿದ್ದಾರೆ. ಮೈಸೂರಿನಲ್ಲಿಂದು ಅವರು ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಅಂಕಿತಾಳ ಸಾಧನೆಗೆ ಹರ್ಷ ವ್ಯಕ್ತಪಡಿಸಿ, ಸರ್ಕಾರಿ ವಸತಿ ಶಾಲೆಯ ಹೆಚ್ಚಿನ ಸಂಖ್ಯೆಯ ಮಕ್ಕಳು ರ್‍ಯಾಂಕ್ ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಬೇಕು. ಶೈಕ್ಷಣಿಕ ರಂಗದಲ್ಲಿ ಈ ವಿದ್ಯಾರ್ಥಿಗಳು ರಾಜ್ಯಕ್ಕೆ ಮಾದರಿಯಾಗಬೇಕು ಎಂದು ಹೇಳಿದರು.

<><*<><>*><>

ಇಂದು ವಿಶ್ವಗುರು ಜಗಜ್ಯೋತಿ ಬಸವಣ್ಣನವರ ಜಯಂತಿ. ಇದರ ಅಂಗವಾಗಿ ರಾಜ್ಯಾದ್ಯಂತ ಜಯಂತ್ಯೋತ್ಸವಗಳನ್ನು ಆಚರಿಸಲಾಗುತ್ತಿದೆ. ಬೆಂಗಳೂರಿನ ಬಸವೇಶ್ವರ ವೃತ್ತದಲ್ಲಿರುವ ಬಸವಣ್ಣನವರ ಪುತ್ಥಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ಬಳಿಕ ಬೆಂಗಳೂರಿನ ಬಸವ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಶಿಕ್ಷಣ ತಜ್ಞ ಪ್ರಭಾಕರ್ ಕೋರೆ ಅವರಿಗೆ ಕಾಯಕ ರತ್ನ ಪ್ರಶಸ್ತಿ ಪ್ರದಾನ ಮಾಡಿದರು. ಜಯಂತಿ ಅಂಗವಾಗಿ ಸಾಮಾಜಿಕ ಮಾಧ್ಯಮದಲ್ಲಿ ಬಸವಣ್ಣರನ್ನು ಸ್ಮರಿಸಿರುವ ಮುಖ್ಯಮಂತ್ರಿ, ಕಾಯಕಯೋಗಿ ಬಸವಣ್ಣನವರು ನನ್ನ ಪಾಲಿಗೆ ಆದರ್ಶ, ಗುರು, ದಾರ್ಶನಿಕ, ಮಹಾನ್ ಸಂತ, ಜ್ಞಾನ ಭಂಡಾರ, ಸಾಮಾಜಿಕ ಕ್ರಾಂತಿಯ ಹರಿಕಾರ, ಶೋಷಣೆಯ ವಿರುದ್ಧದ ಹೋರಾಟಗಳಿಗೆ ಶಕ್ತಿಯಾಗಿದ್ದಾರೆ. ಜಾತಿ, ಧರ್ಮ, ಲಿಂಗಾಧಾರಿತ ಅಸಮಾನತೆ ಇಲ್ಲದ ಸರ್ವರಿಗೂ ಸಮಪಾಲು - ಸರ್ವರಿಗೂ ಸಮಬಾಳಿನ ಸಮತೆಯ ಸಮಾಜ ನಿರ್ಮಾಣವಾಗಬೇಕೆಂಬ ಅವರ ಆಶಯ ನನ್ನದೂ ಆಗಿದೆ ಎಂದಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಬಸವಣ್ಣನವರಿಗೆ ಗೌರವ ಸಲ್ಲಿಸಿದರು. ಈ ವೇಳೆ ಅವರು ಮಾತನಾಡಿ, ಬಸವಣ್ಣನವರು ತುಳಿತಕ್ಕೆ ಒಳಗಾದ ಸಮಾಜಕ್ಕೆ ನ್ಯಾಯ ಕೊಡಿಸುವ ಆಶಯ ಹೊಂದಿದ್ದರು. ತಮ್ಮ ನಿಜ ಜೀವನದ ಅನುಭವಗಳನ್ನು ವಚನಗಳ ಮೂಲಕ ಸಮಾಜಕ್ಕೆ ಉತ್ತಮ ಸಂದೇಶಗಳನ್ನು ನೀಡಿದ್ದಾರೆ ಎಂದರು.

<><*<><>*><>

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಚುನಾವಣಾ ನೀತಿಸಂಹಿತೆ ಜಾರಿಯಲ್ಲಿರುವ ಹಿನ್ನೆಲೆ ಜಯಂತ್ಯೋತ್ಸವಗಳನ್ನು ಸರಳವಾಗಿ ಆಚರಿಸಲಾಗುತ್ತಿದೆ. ವಿಜಯಪುರ ಜಿಲ್ಲೆಯ ಬಸವನ ಜನುಮ ಸ್ಥಳ ಬಾಗೇವಾಡಿಯಲ್ಲಿ ಬಸವೇಶ್ವರ ಜಯಂತಿಯನ್ನು ಸರಳವಾಗಿ ಆಚರಿಸಲಾಯಿತು. ನಗರದಲ್ಲಿರುವ ಅಶ್ವರೂಢ ಬಸವೇಶ್ವರ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು. ಬಸವ ಸ್ಮಾರಕದಲ್ಲಿ ಬೆಳ್ಳಿಯ ತೊಟ್ಟಿಲಲ್ಲಿ ಬಾಲ ಬಸವಣ್ಣನನ್ನು ಕೂರಿಸಿ, ಸುಮಂಗಲೆಯರು ನಾಮಕರಣ ಶಾಸ್ತ್ರ ಮಾಡಿದರು. ಬಳ್ಳಾರಿಯಲ್ಲಿಂದು ಬಸವಣ್ಣ ಜಯಂತಿ ಅಂಗವಾಗಿ ಎಚ್.ಆರ್.ಜಿ ವೃತ್ತದಲ್ಲಿನ ಬಸವೇಶ್ವರರ ಪುತ್ಥಳಿಗೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಪುಷ್ಪ ನಮನ ಸಲ್ಲಿಸಿ ಬಸವೇಶ್ವರರ ಕಾಯಕ ತತ್ವದ ಮಹತ್ವದ ಬಗ್ಗೆ ತಿಳಿಸಿದರು. ನಂತರ ನಡೆದ ಹೇಮರೆಡ್ಡಿ ಮಲ್ಲಮ್ಮ ಜಯಂತಿಯಲ್ಲಿ ಮಲ್ಲಮ್ಮನ ಭಾವ ಚಿತ್ರಕ್ಕೆ ಪುಷ್ಪ ಅರ್ಪಿಸಿ ಮಲ್ಲಮ್ಮನ ಶಿವ ಭಕ್ತಿಯನ್ನು ಸ್ಮರಿಸಲಾಯ್ತು. ಧಾರವಾಡ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಗಜ್ಯೋತಿ ಬಸವೇಶ್ವರ ಜಯಂತಿ ಆಚರಿಸಲಾಯಿತು. ಜಿಲ್ಲಾಧಿಕಾರಿ ದಿವ್ಯಪ್ರಭು ಜಿ. ಆರ್.ಜೆ, ಅವರು ಬಸವಣ್ಣ ಹಾಗೂ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಅವರ ಭಾವಚಿತ್ರಕ್ಕೆ ಪುಷ್ಪಾರ್ಚಣೆ ಸಲ್ಲಿಸಿದರು. ದಾವಣಗೆರೆ ಜಿಲ್ಲೆಯಲ್ಲಿಂದು ಬಸವಣ್ಣ ಮತ್ತು ಶರಣೆ ಹೇಮರೆಡ್ಡಿ ಮಲ್ಲಮ್ಮ ಅವರ ಜಯಂತಿಯನ್ನು ಜಿಲ್ಲಾಡಳಿತದಿಂದ ಸರಳವಾಗಿ ಆಚರಿಸಲಾಯಿತು. ಜಿಲ್ಲಾಧಿಕಾರಿ ಡಾ.ಎಂ.ವಿ.ವೆಂಕಟೇಶ್ ಶರಣರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಗೌರವ ಸಲ್ಲಿಸಿದರು. ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಇಟ್ನಾಳ್ ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು. ಯಾದಗಿರಿ ಜಿಲ್ಲೆಯಲ್ಲೂ ಸರಳ ಹಾಗೂ ಸಾಂಕೇತಿಕವಾಗಿ ಬಸವೇಶ್ವರ ಹಾಗೂ ಹೇಮರೆಡ್ಡಿ ಮಲ್ಲಮ್ಮನವರ ಭಾವಚಿತ್ರಕ್ಕೆ ಪು?ರ್ಚನೆಗೈದು ಜಯಂತಿ ಆಚರಿಸಲಾಯಿತು. ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ಡಾ. ಬಿ.ಸುಶೀಲಾ ಜಗಜ್ಯೋತಿ ಬಸವಣ್ಣನವರ ಹಾಗೂ ಹೇಮರೆಡ್ಡಿ ಮಲ್ಲಮ್ಮನವರ ತತ್ವ ಆದರ್ಶಗಳು ಇಂದಿಗೂ ನಮಗೆ ಮಾರ್ಗದರ್ಶಕವಾಗಿದ್ದು, ಬದುಕಿಗೆ ದಾರಿದೀಪವಾಗಿವೆ ಎಂದರು. ಹಾವೇರಿ ನಗರದ ಹೊಸಮಠದ

ವೃತ್ತದಲ್ಲಿರುವ ಜಗಜ್ಯೋತಿ ಬಸವೇಶ್ವರ ಪುತ್ಥಳಿಗೆ ಜಿಲ್ಲಾಧಿಕಾರಿ ರಘುನಂದನ್ ಮೂರ್ತಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸೇರಿ ಹಲವು ಅಧಿಕಾರಿಗಳು ಮಾಲಾರ್ಪಣೆ ಮಾಡಿದರು.

**<><*<><>*><>**

ದೇಸಿಯ ಬಿತ್ತನೆ ಬೀಜಗಳ ವೈವಿಧ್ಯದ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಇದೇ ೧೨ರಂದು ದಾವಣಗೆರೆ ಕೃಷಿ ವಿಜ್ಞಾನ ಕೇಂದ್ರದ ಆವರಣದಲ್ಲಿ ‘ಪಾರಂಪರಿಕ ಬೀಜೋತ್ಸವ’ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ದೇವರಾಜ್ ಹೇಳಿದ್ದಾರೆ. ಒಂದು ದಿನದ ಈ ಉತ್ಸವದಲ್ಲಿ ದೇಶದ ವಿವಿಧ ಭಾಗಗಳಿಂದ ೩೦ಕ್ಕೂ ಹೆಚ್ಚಿನ ಬೀಜ ಸಂರಕ್ಷಕರ ತಂಡಗಳು ಪಾಲ್ಗೊಳ್ಳಲಿವೆ. ವಿವಿಧ ದೇಸಿ ತಳಿಗಳನ್ನು ಪ್ರದರ್ಶಿಸಲಾಗುತ್ತಿದ್ದು, ಒಂದು ಸಾವಿರಕ್ಕೂ ಹೆಚ್ಚಿನ ದೇಸಿ ಧಾನ್ಯ, ತರಕಾರಿ, ಕಾಳು, ಗೆಡ್ಡೆ ಗೆಣಸು, ಸೊಪ್ಪು ಮತ್ತು ಹಣ್ಣಿನ ತಳಿಗಳು ಪ್ರದರ್ಶನಗೊಳ್ಳಲಿವೆ. ಗುಣಮಟ್ಟದ ಭತ್ತ, ಸಿರಿಧಾನ್ಯ ಮತ್ತು ತರಕಾರಿ ಬೀಜಗಳು ಮಾರಾಟಕ್ಕೆ ಸಿಗಲಿವೆ. ಕೆಂಪು ಬಣ್ಣದ ’ಸಿದ್ಧ ಹಲಸು’ ಮತ್ತು ಇತರೆ ಹಣ್ಣಿನ ಗಿಡಗಳು ಮಾರಾಟಕ್ಕೆ ಲಭ್ಯವಿರುತ್ತವೆ. ರೈತ ವಿಜ್ಞಾನಿಗಳು ಅಭಿವೃದ್ಧಿಪಡಿಸಿದ ಭತ್ತದ ತಳಿಗಳ ಮಾರಾಟಕ್ಕೆ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಹೇಳಿದರು. ಅಂದು ಬೆಳಿಗ್ಗೆ ೯ ಗಂಟೆಯಿಂದ ಸಂಜೆ ೬ ಗಂಟೆವರೆಗೆ ನಡೆಯುವ ಕಾರ್ಯಕ್ರಮವನ್ನು ರಾಜ್ಯೋತ್ಸವ ಪುರಸ್ಕೃತ ವಿಜೇತೆ ಕೋಲಾರದ ಬೀಜಮಾತೆ ಪಾಪಮ್ಮ ಮತ್ತು ಮೈಸೂರಿನ ಬೀಜಮಾತೆ ಪದ್ಮಾವತಮ್ಮ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದರು.

**<><*<><>*><>**

ಬೋರ್‌ವೆಲ್‌ಗಳನ್ನು ಕೊರೆಸುವ ಮೂಲಕ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು ಕೊರತೆಯಾಗದಂತೆ ಸಮರ್ಪಕವಾಗಿ ನಿರ್ವಹಣೆ ಮಾಡುವಂತೆ ಎಲ್ಲಾ ಅಧಿಕಾರಿಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್ ತಿಳಿಸಿದ್ದಾರೆ. ಮೈಸೂರಿನಲ್ಲಿ ನಡೆದ ಜಲಜೀವನ್ ಮಿಷನ್, ಕುಡಿಯುವ ನೀರು, ಮನ್ರೇಗಾ ಮುಂತಾದ ಯೋಜನೆ ಕುರಿತ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಈ ವೇಳೆ, ಬಹುಗ್ರಾಮ ಕುಡಿಯುವ ನೀರಿನ ಯೋಜನೆ, ನೀರಿನ ಪರೀಕ್ಷೆ, ಜಲಜೀವನ್ ಮಿಷನ್, ಮನ್ರೇಗಾ ಯೋಜನೆಯ ಕ್ರಿಯಾ ಯೋಜನೆ ಕುರಿತು ಮತ್ತು ಕಾಮಗಾರಿಗಳ ಬಗ್ಗೆ ಪರಿಶೀಲನೆ ನಡೆಸಿದರು. ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಬೂದು ನೀರು ನಿರ್ವಹಣಾ ಘಟಕ ಕುರಿತು ಹಾಗೂ ಸಮುದಾಯ ಬಚ್ಚಲು ಗುಂಡಿ ಕಾಮಗಾರಿಗಳನ್ನು ಕೈಗೊಳ್ಳಲು ಸೂಚಿಸಿದರು.

**<><*<><>*><>**

ರೈತರು ತಮ್ಮ ಖಾತೆಗಳಿಗೆ ಬೆಳೆ ಹಾನಿ ಪರಿಹಾರ ಜಮೆಯಾಗದೇ ಇದ್ದಲ್ಲಿ ಹತ್ತಿರದ ತಹಶೀಲ್ದಾರ ಕಚೇರಿಯನ್ನು ಸಂಪರ್ಕಿಸುವಂತೆ ಉತ್ತರಕನ್ನಡ ಅಪರ ಜಿಲ್ಲಾಧಿಕಾರಿ ಪ್ರಕಾಶ ರಾಜಪುತ್ ತಿಳಿಸಿದ್ದಾರೆ. ಪರಿಹಾರವು ಖಾತೆಗೆ ಜಮಾ ಆದ ಬಗ್ಗೆ ಪರಿಶೀಲಿಸುವ, ಅನುದಾನ ಜಮೆಯಾಗದೇ ಇರುವ ತಾಂತ್ರಿಕ ತೊಂದರೆಗಳು ಅಥವಾ ಬ್ಯಾಂಕ್ ಖಾತೆಯ ಕೆಲವೊಂದು ನ್ಯೂನತೆಗಳನ್ನು ಪರಿಹರಿಸುವ ಬಗ್ಗೆ ಜಿಲ್ಲೆಯ ಬರಪೀಡಿತ ೧೧ ತಾಲ್ಲೂಕುಗಳಲ್ಲಿನ ತಹಶೀಲ್ದಾರ ಕಚೇರಿಗಳಲ್ಲಿ ರೈತರ ಸಲಹಾ ಕೇಂದ್ರವನ್ನು ಸ್ಥಾಪಿಸಲಾಗಿದೆ. ಸಂಬಂಧಿಸಿದ ತಹಶೀಲ್ದಾರ ಕಚೇರಿಯನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಿ ಮಾಹಿತಿಯನ್ನು ಪಡೆಯಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<><>*><>**

ಹಾವೇರಿ ಜಿಲ್ಲೆಯಲ್ಲಿ ಕಳೆದ ಸಾಲಿನಲ್ಲಿ ಮಲೇರಿಯಾ ಪ್ರಕರಣಗಳ ನಿಯಂತ್ರಣಕ್ಕೆ ಹಾಗೂ ಚಿಕಿತ್ಸೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಸಾಂಕ್ರಾಮಿಕ ರೋಗಗಳ ನಿಯಂತ್ರಣಾಧಿಕಾರಿ ಡಾ. ಸರಿತಾ ಹೇಳಿದ್ದಾರೆ. ಜಿಲ್ಲೆಯಲ್ಲಿ ನಾಲ್ಕು ಮಲೇರಿಯಾ ಪ್ರಕರಣಗಳು ಕಂಡುಬಂದಿದ್ದು, ಸೂಕ್ತ ಚಿಕಿತ್ಸೆ ನೀಡಲಾಗುತ್ತಿದೆ. ಈ ರೋಗದಿಂದ ಈವರೆಗೆ  ಯಾವುದೇ ಸಾವು-ನೋವು ಉಂಟಾಗಿಲ್ಲ. ಮಲೇರಿಯಾ, ಡೆಂಘಿ, ಚಿಕೂನ್‌ಗುನ್ಯ, ಮಿದುಳು ಜ್ವರ ಹಾಗೂ ಆನೆಕಾಲುರೋಗ ಸೊಳ್ಳೆ ಕಚ್ಚುವುದರಿಂದ ಬರುತ್ತವೆ. ಪ್ರಾಥಮಿಕ ಹಂತದಲ್ಲೇ ಚಿಕಿತ್ಸೆ ಪಡೆಯುವುದರಿಂದ ಮುಂದೆ ಆಗುವ ಅನಾಹುತಗಳನ್ನು ತಡೆಯಬಹುದು. ಸಾಮಾನ್ಯ ಜ್ವರಕ್ಕೂ ರಕ್ತ ಪರೀಕ್ಷೆ ಮಾಡಿಸಿ ತ್ವರಿತವಾಗಿ ಚಿಕಿತ್ಸೆ ಪಡೆಯಿರಿ. ರೋಗವನ್ನು ನಿಯಂತ್ರಿಸಲು ಸೊಳ್ಳೆ ಪರದೆ ಮತ್ತು ಸೊಳ್ಳೆ ನಿವಾರಕಗಳನ್ನು ಬಳಕೆ ಮಾಡಬೇಕು ಎಂದು ಸಾರ್ವಜನಿಕರಿಗೆ ಅವರು ಮನವಿ ಮಾಡಿದ್ದಾರೆ.  ಬಳಿಕ ಅವರು, ಪ್ರಸಕ್ತ ಬೇಸಿಗೆಯಲ್ಲಿ ಬಿಸಿಲಿನ ತಾಪಮಾನ ಹೆಚ್ಚಾಗಿದ್ದು, ಶಾಖಾಘಾತ ತಡೆಯಲು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು ಅಗತ್ಯವಾಗಿದೆ.ತೆಳುವಾದ ಹಾಗೂ ತಿಳಿಬಣ್ಣದ ಸಡಿಲವಾದ ಹತ್ತಿ ಬಟ್ಟೆ ಧರಿಸಬೇಕು. ಮನೆಯಿಂದ ಹೊರಗೆ ಹೋಗುವಾಗ ಛತ್ರಿ, ಟೋಪಿ ಬಳಸಬೇಕು ಎಂದು ಅವರು ಸಲಹೆ ನೀಡಿದ್ದಾರೆ.

**<><*<><>*><>**

ಗದಗ ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶದ ಸಾರ್ವಜನಿಕರಿಗೆ ಸಮರ್ಪಕ ಕುಡಿಯುವ ನೀರು ಪೂರೈಕೆಗೆ ಅಧಿಕಾರಿಗಳು ಆದ್ಯತೆ ನೀಡಬೇಕು ಎಂದು  ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ‘ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ’ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಕಾರ್ಯನಿರ್ವಹಿಸುವ ಸ್ಥಳೀಯ ಮಟ್ಟದ ಅಧಿಕಾರಿ ಸಿಬ್ಬಂದಿ ಪರಿಸ್ಥಿತಿಗೆ ಅನುಗುಣವಾಗಿ ಜನಸಾಮಾನ್ಯರಿಗೆ ಕುಡಿಯುವ ನೀರಿನ ಪೂರೈಕೆಗೆ ಮುಂದಾಗಬೇಕು. ಜಲಮೂಲಗಳ ಸದ್ಬಳಕೆ ಮಾಡಿಕೊಂಡು ಸಾರ್ವಜನಿಕರಿಗೆ ಸಮರ್ಪಕ ನೀರು ಪೂರೈಸುವ ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸುವಂತೆ ಅವರು ಸೂಚಿಸಿದರು.

**<><*<><>*><>**

ಬಳ್ಳಾರಿ ಜಿಲ್ಲೆಯ ತೋರಣಗಲ್ಲಿನ ಉಕ್ಕು ಕಾರ್ಖಾನೆಯಲ್ಲಿ ನಿನ್ನೆ ಸಂಭವಿಸಿದ ಅವಘಡದಲ್ಲಿ ಮೂವರು ಜನ ನೌಕರರು ಸಾವನ್ನಪ್ಪಿದ್ದಾರೆ. ಕಾರ್ಖಾನೆಯ ಕಾರ್ಯನಿರತರಾಗಿದ್ದ ಉದ್ಯೋಗಿಗಳು ವಾಟರ್ ಟ್ಯಾಂಕ್ ಹತ್ತಿರ ಪರಿಶೀಲಿಸಲು ಹೋದಾಗ ದಿಢೀರನೆ ದೊಡ್ಡ ಪ್ರಮಾಣದ ಘಟಕದಿಂದ ಬಿಟ್ಟಿದ್ದರಿಂದ ನೀರಿನ ರಭಸಕ್ಕೆ ಮೂವರು ಮೃತಪಟ್ಟಿದ್ದಾರೆ.

**<><*<><>*><>**

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ನಡೆಯುವ ಐಪಿಎಲ್ ಟಿ-೨೦ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ಹಾಗೂ ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭:೩೦ ಕ್ಕೆ ಆರಂಭವಾಗಲಿದೆ.